ಶಾಲೆಗಳಲ್ಲಿ ಇಂಗ್ಲೀಷನ್ನು ಒಂದು ಭಾಷೆಯನ್ನಾಗಿ ಕಲಿಸಲು ಆಸ್ಪದ ಕಲ್ಪಿಸಲಾಗಿದೆ

ಈ) ಅನಧಿಕೃತ ಆಂಗ್ಲ ಮಾಧ್ಯಮ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಮಕ್ಕಳಿಗೆ, ಮುಂದಿನ ಶೈಕ್ಷಣಿಕ ಸಾಲಿನಿಂದ ಸದರಿ ಶಾಲೆಗಳ ಸುತ್ತಮುತ್ತಲಿನ ಸರ್ಕಾರಿ ಶಾಲೆಗಳು, ಅನುದಾನಿತ ಶಾಲೆಗಳು ಹಾಗೂ ಅನುದಾನರಹಿತ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾಭ್ಯಾಸ ಮುಂದುವರೆಸಲು ಪರ್ಯಾಯ ವ್ಯವಸ್ಥೆ ಕಲ್ಪಿಸಲು ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ ತಿಳಿಸಲಾಗಿದೆ

1611 (1909) ಶ್ರೀ ಪಾಟೀಲ್ ಬಿ ಆರ್ (ಆಳಂದ) – ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಹಾರಾಷ್ಟ್ರ ರಾಜ್ಯದ ಗಡಿಭಾಗದಿಂದ ನದಿ–ಹಳ್ಳ–ನಾಲೆಗಳಿಂದ ನೀರು ಕರ್ನಾಟಕದ ಗಡಿಗೆ ಸ್ವಾಭಾವಿಕವಾಗಿ ಹರಿದು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಮಹಾರಾಷ್ಟ್ರ ಸರ್ಕಾರ ಈ ನದಿ–ಹಳ್ಳ– ನಾಲೆಗಳ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳುತ್ತಿರುವುದರಿಂದ ಆ ನೀರು ಅನೇಕ ಕಡೆ ಬರದೆ ತೊಂದರೆಯಾಗಿರುವುದನ್ನು ಸರ್ಕಾರ ಗಮನಿಸಿದೆಯೇ,

ಇ) ಗಮನಿಸಿದ್ದರೆ, ಇದಕ್ಕೆ ಪರಿಹಾರವೇನು?

ಶ್ರೀ ಕೆ ಎಸ್ ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)

ಅ) ಬಂದಿದೆ

ಆ) ಮಹಾರಾಷ್ಟ್ರ ಗಡಿಭಾಗದಲ್ಲಿ ನದಿಗಳ ಮಾಪನ ಮಾಹಿತಿಯನ್ನು ಪರಿಶೀಲಿಸಿದಾಗ ಇತ್ತೀಚಿನ ವರ್ಷಗಳಲ್ಲಿ ನದಿಗಳಲ್ಲಿ ಹರಿವು ಕಡಿಮೆಯಾಗಿರುವುದು ಕಂಡುಬರುತ್ತದೆ

ಇ) ಈ ಕುರಿತು ವಿವರವಾಗಿ ಪರಿಶೀಲಿಸಬೇಕಾಗಿದೆ

1612 (1472) ಶ್ರೀ ಪಾಟೀಲ್ ಎಸ್ ಎಸ್ (ಮುಂಡರಗಿ) – ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?